## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿರುವ ಹಬ್ಬದ ಮುಂಗಡದ ಮೊತ್ತವನ್ನು ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ:
1. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು, ಇವರ ಮನವಿ ಪತ್ರ ದಿನಾಂಕ:04/12/2021.
2. ಸರ್ಕಾರದ ಆದೇಶ ಸಂಖ್ಯೆ: ಆಇ 19 ಮಕಮು 2018, ದಿನಾಂಕ:11/01/2019.

**ಪ್ರಸ್ತಾವನೆ:**

ಮೇಲೆ ಕ್ರಸಂ. (1) ರಲ್ಲಿ ಓದಲಾದ ದಿನಾಂಕ:04/12/2021 ರ ಪತ್ರದಲ್ಲಿ ದಿನಾಂಕ:28/10/2021 ರಂದು ನಡೆದ ರಾಜ್ಯ ಮಟ್ಟದ ಜಂಟಿ ಸಮಾಲೋಚನಾ ಸಮಿತಿ ಸಭೆಯಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಹಬ್ಬದ ಮುಂಗಡದ ಮೊತ್ತವನ್ನು ರೂ.10,000/- ಗಳಿಂದ ರೂ.25,000/- ಗಳಿಗೆ ಹೆಚ್ಚಳ ಮಾಡುವ ಬಗ್ಗೆ ಚರ್ಚಿಸಿ, ಈ ಬಗ್ಗೆ ಆರ್ಥಿಕ ಇಲಾಖೆಯು ಪರಿಶೀಲಿಸುವಂತೆ ಸೂಚಿಸಿರುವ ಹಿನ್ನೆಲೆಯಲ್ಲಿ, ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು, ಇವರು, ರಾಜ್ಯ ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿರುವ ಹಬ್ಬದ ಮುಂಗಡವನ್ನು ರೂ.10,000/- ಗಳಿಂದ ರೂ.25,000/- ಗಳಿಗೆ ಹೆಚ್ಚಳ ಮಾಡುವಂತೆ ಕೋರಿರುತ್ತಾರೆ.

ಮೇಲೆ ಕ್ರಸಂ.(2)ರಲ್ಲಿ ಓದಲಾದ ದಿನಾಂಕ:11/01/2019 ರ ಆದೇಶದಲ್ಲಿ 6ನೇ ವೇತನ ಆಯೋಗದ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರಿಗೆ ಮಂಜೂರು ಮಾಡುತ್ತಿದ್ದ ಹಬ್ಬದ ಮುಂಗಡವನ್ನು ರೂ.5,000/- ಗಳಿಂದ ರೂ.10,000/- ಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು, ರಾಜ್ಯ ಸರ್ಕಾರಿ ನೌಕರರಿಗೆ ನೀಡಲಾಗುತ್ತಿರುವ ಹಬ್ಬದ ಮುಂಗಡವು ಬಡ್ಡಿ ರಹಿತವಾಗಿದ್ದು, ಅದನ್ನು ಪಡೆದ ಮುಂದಿನ 10 ತಿಂಗಳ ಅವಧಿಯಲ್ಲಿ ಮರುಪಾವತಿಯಾಗುವುದರಿಂದ ಹಬ್ಬದ ಮುಂಗಡವನ್ನು ಪರಿಷ್ಕರಿಸಿ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 8 ಮಕಮು 2021,**
**ಬೆಂಗಳೂರು, ದಿನಾಂಕ: 14/12/2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯ ಸಿವಿಲ್ ಸೇವಾ ವೃಂದದಲ್ಲಿ ಖಾಯಂ ಆಗಿ ಸೇರ್ಪಡೆಯಾಗಿರುವ ಅಖಿಲ ಭಾರತ ಸೇವೆಯ ಅಧಿಕಾರಿಗಳು ಸೇರಿದಂತೆ ಒಬ್ಬ ಖಾಯಂ ಸರ್ಕಾರಿ ನೌಕರನಿಗೆ ಒಂದು ಆರ್ಥಿಕ ವರ್ಷದಲ್ಲಿ ಒಂದು ಬಾರಿಗೆ ಮಾತ್ರ ಪ್ರಸ್ತುತ ಮಂಜೂರು ಮಾಡಲಾಗುತ್ತಿರುವ ಬಡ್ಡಿ ರಹಿತ ಹಬ್ಬದ ಮುಂಗಡವನ್ನು ತಕ್ಷಣದಿಂದ ಜಾರಿಗೆ ಬರುವಂತೆ **ರೂ.10,000/- ಗಳಿಂದ ರೂ.25,000/- ಗಳಿಗೆ** ಹೆಚ್ಚಿಸಿ ಆದೇಶಿಸಿದೆ.

ದಿನಾಂಕ:21/10/1994 ರ ಸರ್ಕಾರಿ ಆದೇಶ ಸಂಖ್ಯೆ: ಆಇ 48 ಮಕಮು 1994 ರಲ್ಲಿ ಮುಂಗಡಗಳನ್ನು ಮಂಜೂರು ಮಾಡಲು ಅನುಸರಿಸುತ್ತಿರುವ ಷರತ್ತು ಮತ್ತು ನಿಬಂಧನೆಗಳು ಮುಂದುವರೆದು ಅನ್ವಯಿಸುತ್ತವೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Dhayapule

(ನೇತ್ರಪ್ರಭಾ ಎಂ. ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಆಡಳಿತ & ಮುಂಗಡಗಳು).

14/12/21

**ಇವರಿಗೆ:**
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಲು.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ತನಿಖೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ / ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಎಲ್ಲಾ ಕಾರ್ಯದರ್ಶಿಗಳು.
3. ಎಲ್ಲಾ ಜಿಲ್ಲಾಧಿಕಾರಿಗಳು.
4. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
5. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಂಗಳೂರು.
9. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ / ವಿಧಾನ ಪರಿಷತ್ ಸಚಿವಾಲಯ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಎಫ್.ಆರ್. & ಬಿ.ಸಿ.ಸಿ.), ವಿಧಾನ ಸೌಧ, ಬೆಂಗಳೂರು (ಕರ್ನಾಟಕ ಆರ್ಥಿಕ ಸಂಹಿತೆಗೆ ಸೂಕ್ತ ತಿದ್ದುಪಡಿ ಹೊರಡಿಸಲು ಕ್ರಮ ಕೈಗೊಳ್ಳಲು).
12. ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸೇವೆಗಳು-2), ವಿಧಾನ ಸೌಧ, ಬೆಂಗಳೂರು.
13. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
14. ಆರ್ಥಿಕ ಇಲಾಖೆಯ ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್-ಸೈಟ್ ನಲ್ಲಿ ಅಪ್-ಲೋಡ್ ಮಾಡಲು.
15. ಕಛೇರಿ ಪ್ರತಿ / ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.